**National**
**Kannada**
**30.08.2024 / 19.35 hrs**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

<u>ಮುಖ್ಯಾಂಶಗಳು</u>

**೧. ಡಿಜಿಟಲ್ ಹಣ ವರ್ಗಾವಣೆಯಿಂದ ಬ್ಯಾಂಕಿಂಗ್ ವ್ಯವಸ್ಥೆಯಲ್ಲಿ ಪಾರದರ್ಶಕತೆ ಹೆಚ್ಚಳ - ಪ್ರಧಾನಿ ನರೇಂದ್ರ ಮೋದಿ**

**೨. ಬೆಂಗಳೂರು-ಮದುರೈ ಮಾರ್ಗ ಸೇರಿದಂತೆ ಮೂರು ವಂದೇ ಭಾರತ್ ರೈಲು ಸಂಚಾರಕ್ಕೆ ನಾಳೆ ಪ್ರಧಾನಿ ಹಸಿರು ನಿಶಾನೆ.**

**೩. ದೇಶದ ಅಭಿವೃದ್ಧಿ ಗುರಿ ಸಾಧನೆಯಲ್ಲಿ ಮಹಿಳೆಯರ ಪಾತ್ರ ಮಹತ್ವದ್ದು - ಉಪರಾಷ್ಟ್ರಪತಿ ಜಗದೀಪ್ ಧನಕರ್**

**೪. ಪ್ಯಾರಿಸ್ ಪ್ಯಾರಾಲಿಂಪಿಕ್ಸ್ ಕ್ರೀಡಾಕೂಟ: ಶೂಟಿಂಗ್‌ನಲ್ಲಿ ಚಿನ್ನ ಗೆದ್ದ ಅವನಿ ಲೇಖಾರ; ಭಾರತಕ್ಕೆ ಇಂದು ೩ ಪದಕ.**

**<><*<><>*><>**

ಭಾರತದ ಹಣಕಾಸು ತಂತ್ರಜ್ಞಾನ - ಫಿನ್‌ಟೆಕ್ ವಲಯ ಜಾಗತಿಕವಾಗಿ ಜನರ ಜೀವನ ಸುಧಾರಣೆಗೆ ನೆರವಾಗಲಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಮುಂಬೈನಲ್ಲಿಂದು ಗ್ಲೋಬಲ್ ಫಿನ್‌ಟೆಕ್ ಸಮಾವೇಶ-೨೦೨೪ ಉದ್ದೇಶಿಸಿ ಮಾತನಾಡಿದ ಅವರು, ಹಣಕಾಸು ಸೇವೆಗಳನ್ನು ಪ್ರಜಾಸತ್ತಾತ್ಮಕ ಗೊಳಿಸುವಲ್ಲಿ ಫಿನ್‌ಟೆಕ್ ಬಹುಮುಖ್ಯ ಪಾತ್ರ ವಹಿಸುತ್ತಿದೆ ಎಂದರು. ಭಾರತವು ಅತಿವೇಗದಲ್ಲಿ ಮತ್ತು ಬೃಹತ್ ಪ್ರಮಾಣದಲ್ಲಿ ಹಣಕಾಸು ತಂತ್ರಜ್ಞಾನವನ್ನು ಒಳಗೊಳ್ಳುತ್ತಿದ್ದು, ಜಗತ್ತಿನ ಒಟ್ಟು ರಿಯಲ್ ಟೈಮ್ ಡಿಜಿಟಲ್ ಹಣ ವರ್ಗಾವಣೆಯಲ್ಲಿ ಅರ್ಧದಷ್ಟು ಭಾರತದ್ದಾಗಿದೆ ಎಂದರು. ಡಿಜಿಟಲ್ ಹಣ ವರ್ಗಾವಣೆಯಿಂದ ಪರ್ಯಾಯ ಆರ್ಥಿಕತೆಯ ಹಾವಳಿ ನಿಯಂತ್ರಣಗೊಂಡಿದ್ದು, ಬ್ಯಾಂಕಿಂಗ್ ವ್ಯವಸ್ಥೆಯಲ್ಲಿ ಪಾರದರ್ಶಕತೆ ಹೆಚ್ಚಾಗಿದೆ ಎಂದು ಪ್ರಧಾನಿ ತಿಳಿಸಿದರು. ದೇಶದಲ್ಲಿ ಫಿನ್‌ಟೆಕ್ ತಂತ್ರಜ್ಞಾನ ಜಾರಿಯಿಂದ ಸಾಮಾಜಿಕ ವಲಯದಲ್ಲೂ ಗಣನೀಯ ಬದಲಾವಣೆಯಾಗುತ್ತಿದೆ ಎಂದ ಪ್ರಧಾನಿ, ಕಳೆದ ದಶಕದಲ್ಲಿ ಫಿನ್‌ಟೆಕ್ ವಲಯದಲ್ಲಿ ೩೧ ಶತಕೋಟಿ ಡಾಲರ್‌ನಷ್ಟು ದಾಖಲೆ ಹೂಡಿಕೆಯಾಗಿದೆ ಹಾಗೂ ಸ್ಟಾರ್ಟ್‌ಅಪ್ ವಲಯದಲ್ಲಿ ಶೇಕಡ ೫೦೦ರಷ್ಟು ಪ್ರಗತಿಯಾಗಿದೆ ಎಂದರು. ಭಾರತೀಯ ರಿಸರ್ವ್ ಬ್ಯಾಂಕ್ ಗವರ್ನರ್ ಶಕ್ತಿಕಾಂತ್ ದಾಸ್, ಪ್ರಸ್ತುತ ಭಾರತ ಬದಲಾವಣೆಯ ಪರ್ವ ಕಾಲದಲ್ಲಿದ್ದು, ಪ್ರತಿ ನಾಗರಿಕರ ಆಕಾಂಕ್ಷೆ ಈಡೇರಿಕೆಗೆ ತಂತ್ರಜ್ಞಾನವನ್ನು ಯಥೋಚಿತವಾಗಿ ಬಳಸಲಾಗುತ್ತಿದೆ ಎಂದರು.

**<><*<><>*><>**

ಮಹಾರಾಷ್ಟ್ರದ ಪಾಲ್ಘರ್ ಜಿಲ್ಲೆಯ ವಧಾವನ್ ಬಂದರು ನಿರ್ಮಾಣಕ್ಕೆ ಪ್ರಧಾನಮಂತ್ರಿ ನರೇಂದ್ರ ಮೋದಿ ಇಂದು ಶಿಲಾನ್ಯಾಸ ನೆರವೇರಿಸಿದರು. ಇದೇ ವೇಳೆ ಒಟ್ಟು ೭೬ ಸಾವಿರ ಕೋಟಿ ರೂಪಾಯಿ ಮೊತ್ತದ ವಿವಿಧ ಯೋಜನೆಗಳಿಗೆ ಚಾಲನೆ ಮತ್ತು ಶಂಕುಸ್ಥಾಪನೆ ನೆರವೇರಿಸಿದರು. ಮೀನುಗಾರಿಕೆ ವಲಯದ ವಿವಿಧ ಯೋಜನೆಗಳನ್ನು ಉದ್ಘಾಟಿಸಿದ ಪ್ರಧಾನಿ, ಮೀನುಗಾರರಿಗೆ ಕಿಸಾನ್ ಕ್ರೆಡಿಟ್ ಕಾರ್ಡ್ ವಿತರಿಸಿದರು. ಬಳಿಕ ಮಾತನಾಡಿದ ಅವರು, ಭಾರತದ ಕರಾವಳಿ ಪ್ರದೇಶಗಳು ಅಭೂತಪೂರ್ವ ಅಭಿವೃದ್ಧಿ ಕಾಣುತ್ತಿವೆ ಎಂದರು. ದೇಶದ ಬಂದರುಗಳು ಮತ್ತು ಜಲಸಾರಿಗೆ ಅಭಿವೃದ್ಧಿಗೆ ಕೇಂದ್ರ ಅತಿಹೆಚ್ಚಿನ ಆದ್ಯತೆ ನೀಡಿದ್ದು, ಕಳೆದ ದಶಕದಲ್ಲಿ ಈ ವಲಯಕ್ಕೆ ಲಕ್ಷಾಂತರ ಕೋಟಿ ರೂಪಾಯಿ ಒದಗಿಸಲಾಗಿದೆ, ಈ ವಲಯಕ್ಕೆ ಖಾಸಗಿ ಹೂಡಿಕೆಗಳು ಹರಿದು ಬರುತ್ತಿದ್ದು, ಯುವಜನರಿಗೆ ಹೆಚ್ಚಿನ ಉದ್ಯೋಗಾವಕಾಶಗಳು ಸೃಷ್ಟಿಯಾಗುತ್ತಿವೆ ಎಂದರು. ದಹನು ನಗರದ ಬಳಿ ಇರುವ ವಧಾವನ್ ಬಂದರು ದೇಶದ ಅತಿದೊಡ್ಡ ಆಳಸಾಗರ ಬಂದರಾಗಿದ್ದು, ಇದರಿಂದ ಅಂತಾರಾಷ್ಟ್ರೀಯ ಹಡಗು ಮಾರ್ಗಗಳಿಗೆ ನೇರ ಸಂಪರ್ಕ ದೊರೆಯಲಿದ್ದು, ಸರಕು ಸಾಗಣೆ ವೆಚ್ಚ ಕಡಿಮೆಯಾಗಲಿದೆ.

**<><*<><>*><>**

ಬೆಂಗಳೂರು-ಮದುರೈ ಮಾರ್ಗ ಸೇರಿದಂತೆ ಮೂರು ವಂದೇ ಭಾರತ್ ರೈಲು ಸಂಚಾರಕ್ಕೆ ಪ್ರಧಾನಿ ನರೇಂದ್ರ ಮೋದಿ ಅವರು ನಾಳೆ ವಿಡಿಯೋ ಕಾನ್ಫರೆನ್ಸ್ ಮೂಲಕ ಹಸಿರುನಿಶಾನೆ ತೋರಲಿದ್ದಾರೆ. ಮೇಕ್ ಇನ್ ಇಂಡಿಯಾ ಮತ್ತು ಆತ್ಮನಿರ್ಭರ್ ಭಾರತ್ ಯೋಜನೆಗಳಡಿ ದೇಸಿ ನಿರ್ಮಿತ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲುಗಳು ಮೀರತ್-ಲಖನೌ, ಬೆಂಗಳೂರು-ಮದುರೈ ಮತ್ತು ಚೆನ್ನೈ-ನಾಗರಕೊಯಿಲ್ ನಿಲ್ದಾಣಗಳ ನಡುವೆ ಸಂಚರಿಸಲಿವೆ. ಈ ಮೂಲಕ ಕರ್ನಾಟಕ, ಉತ್ತರಪ್ರದೇಶ ಮತ್ತು ತಮಿಳುನಾಡು ರಾಜ್ಯಗಳ ಪ್ರಯಾಣಿಕರಿಗೆ ಅತ್ಯಾಧುನಿಕ ಮತ್ತು ಜಾಗತಿಕ ಶ್ರೇಣಿಯ ರೈಲು ಸೇವೆಗಳನ್ನು ಒದಗಿಸಲಾಗುತ್ತಿದೆ. ಈ ಮೂರು ರೈಲುಗಳ ಸಂಚಾರದಿಂದ ಸಾಮಾನ್ಯ ಪ್ರಯಾಣಿಕರ ಜತೆಗೆ ವೃತ್ತಿಪರರು, ಉದ್ಯಮಿಗಳು ಹಾಗೂ ವಿದ್ಯಾರ್ಥಿ ಸಮುದಾಯಗಳಿಗೂ ಅನುಕೂಲವಾಗಲಿದೆ.

**<><*<><>*><>**

ಪ್ರಧಾನಿ ನರೇಂದ್ರ ಮೋದಿ ಅವರು, ಜಿಲ್ಲಾ ನ್ಯಾಯಾಲಯಗಳ ರಾಷ್ಟ್ರೀಯ ಸಮಾವೇಶಕ್ಕೆ ದೆಹಲಿಯಲ್ಲಿ ನಾಳೆ ಚಾಲನೆ ನೀಡಲಿದ್ದಾರೆ. ಇದೇ ಸಂದರ್ಭದಲ್ಲಿ ಸುಪ್ರೀಂಕೋರ್ಟ್‌ನ ೭೫ನೇ ಸಂಸ್ಥಾಪನಾ ದಿನಾಚರಣೆ ಸ್ಮರಣಾರ್ಥ ವಿಶೇಷ ಅಂಚೆಚೀಟಿ ಮತ್ತು ನಾಣ್ಯವನ್ನು ಬಿಡುಗಡೆ ಮಾಡಲಿದ್ದಾರೆ. ಸುಪ್ರೀಂಕೋರ್ಟ್ ಆಯೋಜಿಸಿರುವ ಎರಡು ದಿನಗಳ ಈ ಸಮಾವೇಶದಲ್ಲಿ ಜಿಲ್ಲಾ ನ್ಯಾಯಾಲಯಗಳ ಮೂಲಸೌಕರ್ಯ, ನ್ಯಾಯಾಂಗ ಭದ್ರತೆ, ನ್ಯಾಯಾಲಯದ ಕೊಠಡಿಗಳು, ಪ್ರಕರಣ ನಿರ್ವಹಣೆ ಮತ್ತು ತರಬೇತಿ ಸೇರಿದಂತೆ ಜಿಲ್ಲಾ ನ್ಯಾಯಾಂಗಕ್ಕೆ ಸೇರಿದ ವಿವಿಧ ವಿಚಾರಗಳ ಕುರಿತು ವಿಚಾರಗೋಷ್ಠಿ ನಡೆಯಲಿದೆ. ಸಮಾವೇಶದಲ್ಲಿ ಸುಪ್ರೀಂಕೋರ್ಟ್ ಮುಖ್ಯ ನ್ಯಾಯಮೂರ್ತಿ, ಕೇಂದ್ರ ಕಾನೂನು ಮತ್ತು ನ್ಯಾಯಾಂಗ ಸಚಿವರು, ಅಟಾರ್ನಿ ಜನರಲ್ ಸೇರಿದಂತೆ ಹಲವು ಗಣ್ಯರು ಭಾಗವಹಿಸಲಿದ್ದಾರೆ.

**<><*<><>*><>**

ಸಶಸ್ತ್ರಪಡೆಗಳಲ್ಲಿ ಮಹಿಳಾ ಸಿಬ್ಬಂದಿಯ ಸಂಖ್ಯೆ ಗಣನೀಯ ಏರಿಕೆಯಾಗುತ್ತಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ. ಕೇರಳದ ತಿರುವಂತಪುರಂನಲ್ಲಿಂದು ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಸ್ವಾತಂತ್ರ್ಯಾನಂತರ ಸೇನಾ ಪಡೆಗಳಲ್ಲಿ ಮಹಿಳೆಯರಿಗೆ ಹೆಚ್ಚು ಅವಕಾಶ ದೊರೆತಿರಲಿಲ್ಲ ಆದರೆ ಈಗ ಪರಿಸ್ಥಿತಿ ತೀವ್ರ ಬದಲಾಗಿದೆ ಎಂದರು. ಸಶಸ್ತ್ರ ಪಡೆಗಳಲ್ಲಿ ಮಹಿಳೆಯರ ಪ್ರವೇಶಕ್ಕಿದ್ದ ಅನೇಕ ಅಡೆತಡೆಗಳನ್ನು ನಿವಾರಿಸಲಾಗಿದ್ದು, ಸೈನಿಕ ಶಾಲೆಗಳಲ್ಲೂ ಹೆಣ್ಣುಮಕ್ಕಳಿಗೆ ಪ್ರವೇಶ ನೀಡಲಾಗುತ್ತಿದೆ ಎಂದು ಅವರು ಹೇಳಿದರು. ಭದ್ರತಾ ಪಡೆಗಳಲ್ಲಿ ಮಹಿಳೆಯರಿಗೆ ಮೂರನೇ ಒಂದರಷ್ಟು ಉದ್ಯೋಗಗಳನ್ನು ಕಲ್ಪಿಸುವಂತೆ ಎಲ್ಲ ರಾಜ್ಯಗಳಿಗೆ ಸಲಹೆ-ಸೂಚನೆಗಳನ್ನು ನೀಡಲಾಗಿದೆ ಎಂದು ಸಚಿವ ರಾಜನಾಥ್ ಸಿಂಗ್ ಹೇಳಿದರು.

**<><*<><>*><>**

ದೇಶದ ಅಭಿವೃದ್ಧಿ ಗುರಿಯಲ್ಲಿ ಉದ್ದೇಶಿತ ಪ್ರಗತಿ ಸಾಧಿಸಲು ಮಹಿಳೆಯರ ಪಾತ್ರ ಮಹತ್ವದ್ದು ಎಂದು ಉಪರಾಷ್ಟ್ರಪತಿ ಜಗದೀಪ್ ಧನಕರ್ ಹೇಳಿದ್ದಾರೆ. ದೆಹಲಿಯಲ್ಲಿಂದು 'ವಿಕಸಿತ ಭಾರತದಲ್ಲಿ ಮಹಿಳೆಯರ ಪಾತ್ರ' ವಿಷಯ ಕುರಿತು ಮಾತನಾಡಿದ ಅವರು, ಪ್ರತಿ ಮನೆಯಲ್ಲಿ ಶೌಚಾಲಯ ನಿರ್ಮಾಣ, ಅಡುಗೆ ಅನಿಲ ಸಂಪರ್ಕ, ಕೊಳವೆನೀರು ಸಂಪರ್ಕ ಮುಂತಾದ ಸೌಲಭ್ಯಗಳಿಂದಾಗಿ ಮಹಿಳೆಯರ ಜೀವನಮಟ್ಟ ಸುಧಾರಿಸಿದೆ ಎಂದರು. ದೇಶವು ಪ್ರೌಢ ಮತ್ತು ಔಪಚಾರಿಕ ಆರ್ಥಿಕತೆಯಾಗುವತ್ತ ಅತಿವೇಗದಲ್ಲಿ ಸಾಗುತ್ತಿದ್ದು, ಉತ್ತಮ ಕೈಗಾರಿಕಾ ವಾತಾವರಣ ನಿರ್ಮಾಣವಾಗುತ್ತಿದೆ ಎಂದರು.

**<><*<><>*><>**

ಉಪರಾಷ್ಟ್ರಪತಿ ಜಗದೀಪ್ ಧನಕರ್ ಅವರು ಎರಡು ದಿನಗಳ ಭೇಟಿಗಾಗಿ ನಾಳೆ ಉತ್ತರಾಖಂಡಕ್ಕೆ ತೆರಳಲಿದ್ದಾರೆ. ಭೇಟಿ ವೇಳೆ ಅವರು ಡೆಹ್ರಾಡೂನ್‌ನಲ್ಲಿ ಭಾರತೀಯ ಪೆಟ್ರೋಲಿಯಂ ಸಂಸ್ಥೆಯ ವಿಜ್ಞಾನಿಗಳು, ಬೋಧಕ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಲಿದ್ದಾರೆ. ಬಳಿಕ ಅವರು, ಡೆಹ್ರಾಡೂನ್‌ನಲ್ಲಿರುವ ರಾಷ್ಟ್ರೀಯ ಮಿಲಿಟರಿ ಕಾಲೇಜು ಮತ್ತು ಹೃಷಿಕೇಶಿ ಏಮ್ಸ್ ಕಾಲೇಜಿಗೆ ಭೇಟಿ ನೀಡಲಿದ್ದಾರೆ.

**<><*<><>*><>**

ಮಹದಾಯಿ ಯೋಜನೆಗೆ ಕೇಂದ್ರ ಸರ್ಕಾರದಿಂದ ಪರಿಸರ ತೀರುವಳಿ ದೊರೆತ ಕೂಡಲೇ ಕಾಮಗಾರಿ ಆರಂಭಿಸಲಾಗುವುದು ಎಂದು ಕರ್ನಾಟಕ ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಹುಬ್ಬಳ್ಳಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ೧೬ನೇ ಹಣಕಾಸು ಆಯೋಗದ ಅಧಿಕಾರಿಗಳೊಂದಿಗೆ ನಿನ್ನೆ ಸಮಾಲೋಚನೆಯ ವೇಳೆ ತೆರಿಗೆ ಹಂಚಿಕೆ ಹಾಗೂ ವಿಶೇಷ ಅನುದಾನಗಳ ಬಗ್ಗೆ ರಾಜ್ಯದ ನಿಲುವನ್ನು ಸ್ಪಷ್ಟಪಡಿಸಲಾಗಿದೆ. ಹಿಂದಿನ ಹಣಕಾಸು ಆಯೋಗದಿಂದ ರಾಜ್ಯಕ್ಕೆ ಆಗಿರುವ ಅನುದಾನದ ಕೊರತೆಯನ್ನು ಪ್ರಸಕ್ತ ಆಯೋಗ ಸರಿದೂಗಿಸುವ ವಿಶ್ವಾಸವಿದೆ ಎಂದರು.

**<><*<><>*><>**

ಶಾಲಾ ಶಿಕ್ಷಣದಲ್ಲಿ ಬಹುಭಾಷಾ ಕಲಿಕೆ, ಸ್ಥಳೀಯ ಭಾರತೀಯ ಭಾಷೆಯಲ್ಲಿ ಕಲಿಯುವುದರ ಮಹತ್ವ, ಶಿಕ್ಷಣ ಮಾಧ್ಯಮ ಸೇರಿದಂತೆ ವಿವಿಧ ವಿಷಯಗಳ ಕುರಿತು ಹಣಕಾಸು ಸಚಿವಾಲಯದ ಹಿರಿಯ ಅಧಿಕಾರಿಗಳು ಮತ್ತು ತಜ್ಞರ ಸಭೆ

ದೆಹಲಿಯಲ್ಲಿ ನಡೆಯಿತು. ಶಿಕ್ಷಣ ಸಚಿವಾಲಯದ ಶಾಲಾ ಶಿಕ್ಷಣ ಇಲಾಖೆ ಮತ್ತು ಸಾಕ್ಷರತಾ ಕಾರ್ಯದರ್ಶಿ ಸಂಜಯ್ ಕುಮಾರ್ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಕೌಶಲ್ಯಾಭಿವೃದ್ಧಿ ಕುರಿತು ಸಮಾಲೋಚನೆ ನಡೆಯಿತು. ಮಕ್ಕಳು ತಮ್ಮ ಮಾತೃಭಾಷೆಯಲ್ಲಿ ಹೆಚ್ಚು ಕ್ಷಿಪ್ರವಾಗಿ ಹಾಗೂ ಸ್ಪಷ್ಟವಾಗಿ ಕಲಿಯಲು ಸಾಧ್ಯ ಎಂಬ ಅಭಿಪ್ರಾಯ ತಜ್ಞರಿಂದ ವ್ಯಕ್ತವಾಯಿತು.

<><*<><>*><>

ಕ್ವೀರ್ ಸಮುದಾಯದವರು ಬ್ಯಾಂಕ್‌ಗಳಲ್ಲಿ ಜಂಟಿ ಖಾತೆ ತೆರೆಯಲು ಮತ್ತು ಕ್ವೀರ್ ಸಂಬಂಧದಲ್ಲಿನ ವ್ಯಕ್ತಿಯೊಬ್ಬರನ್ನು ನಾಮ ನಿರ್ದೇಶನ ಮಾಡಲು ಯಾವುದೇ ನಿರ್ಬಂಧಗಳಿಲ್ಲ ಎಂದು ಹಣಕಾಸು ಸಚಿವಾಲಯ ಸ್ಪಷ್ಟಪಡಿಸಿದೆ. ಈ ಸಂಬಂಧ ಹಣಕಾಸು ಸೇವೆಗಳ ಇಲಾಖೆ ನಿನ್ನೆ ಮಾರ್ಗಸೂಚಿ ಹೊರಡಿಸಿದೆ. ಸುಪ್ರಿಯಾ ಚಕ್ರವರ್ತಿ ಪ್ರಕರಣಕ್ಕೆ ಸಂಬಂಧಿಸಿದಂತೆ, ೨೦೨೩ರ ಅಕ್ಟೋಬರ್ ೧೭ರಂದು ಸುಪ್ರೀಂಕೋರ್ಟ್ ಆದೇಶ ಹಿನ್ನೆಲೆಯಲ್ಲಿ ಈ ಮಾರ್ಗಸೂಚಿ ನೀಡಲಾಗಿದೆ. ಬ್ಯಾಂಕ್ ಖಾತೆ ಹೊಂದಿದ ವ್ಯಕ್ತಿಯು ಮೃತಪಟ್ಟಲ್ಲಿ ಖಾತೆಯಲ್ಲಿನ ಬಾಕಿ ಹಣವನ್ನು ನಾಮ ನಿರ್ದೇಶಿತ ವ್ಯಕ್ತಿ ಪಡೆಯಲು ಯಾವುದೇ ನಿರ್ಬಂಧವಿಲ್ಲ ಎಂದು ಸ್ಪಷ್ಟಪಡಿಸಲಾಗಿದೆ.

<><*<><>*><>

ಕೇಂದ್ರ ಸಚಿವ ಸಂಪುಟದ ನೂತನ ಕಾರ್ಯದರ್ಶಿಯಾಗಿ ಹಿರಿಯ ಐಎಎಸ್ ಅಧಿಕಾರಿ ಡಾ. ಟಿ.ವಿ. ಸೋಮನಾಥನ್ ಇಂದು ಅಧಿಕಾರ ಸ್ವೀಕರಿಸಿದರು. ಇವರು ತಮಿಳುನಾಡು ಕ್ಯಾಡರ್ ನ ೧೯೮೭ರ ಸಾಲಿನ ಐಎಎಸ್ ಅಧಿಕಾರಿಯಾಗಿದ್ದಾರೆ. ಪ್ರಸಕ್ತ ಕಾರ್ಯದರ್ಶಿ ರಾಜೀವ್ ಗೌಬಾ ಅವರು ಸೇವಾ ನಿವೃತ್ತಿ ಹೊಂದಿರುವ ಹಿನ್ನೆಲೆಯಲ್ಲಿ ಆ ಹುದ್ದೆಗೆ ಸೋಮನಾಥನ್ ಅವರನ್ನು ನೇಮಕ ಮಾಡಲಾಗಿತ್ತು.

<><*<><>*><>

ಗುಜರಾತಿನ ಕಚ್‌ನಲ್ಲಿ ವಾಯುಭಾರ ಕುಸಿತದಿಂದ ಉಂಟಾಗಿರುವ ಚಂಡಮಾರುತವು ಪಶ್ಚಿಮಾಭಿಮುಖವಾಗಿ ಚಲಿಸುತ್ತಿದ್ದು, ಕಚ್ ಹಾಗೂ ಪಾಕಿಸ್ತಾನ ಕರಾವಳಿಯ ಬಳಿ ಈಶಾನ್ಯ ಅರಬ್ಬಿ ಸಮುದ್ರಕ್ಕೆ ಹೊರಹೊಮ್ಮುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಮುಂದಿನ ೬ ಗಂಟೆಗಳಲ್ಲಿ ಚಂಡಮಾರುತ ತೀವ್ರಗೊಳ್ಳಲಿದ್ದು, ಏತನ್ಮಧ್ಯೆ, ಕಚ್ ಜಿಲ್ಲಾಡಳಿತವು ಸಂಭವನೀಯ ಚಂಡಮಾರುತವನ್ನು ಎದುರಿಸಲು ಸಿದ್ಧವಾಗುತ್ತಿದೆ. ಜನರನ್ನು ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸಲಾಗಿದೆ. ಚಂಡಮಾರುತದಿಂದಾಗಿ ಸಮುದ್ರದ ಪರಿಸ್ಥಿತಿಯು ಪ್ರಕ್ಷುಬ್ಧವಾಗುವ ನಿರೀಕ್ಷೆಯಿರುವುದರಿಂದ ಮುಂದ್ರಾ, ಕಾಂಡ್ಲಾ ಮತ್ತು ಜಖೌ ಬಂದರುಗಳಲ್ಲಿ ಎಚ್ಚರಿಕೆಯ ಸಂಕೇತಗಳನ್ನು ಹಾಕಲಾಗಿದೆ. ಕಛ್ ಜಿಲ್ಲೆಯಲ್ಲಿ ಇಂದು ಅತ್ಯಂತ ಕಡಿಮೆ ಮಳೆಯಾಗಿದೆ ಎಂದು ನಮ್ಮ ಬಾತ್ಮಿದಾರರು ವರದಿ ಮಾಡಿದ್ದಾರೆ.

<><*<><>*><>

ಪ್ಯಾರಿಸ್‌ನಲ್ಲಿ ನಡೆಯುತ್ತಿರುವ ಪ್ಯಾರಾಲಿಂಪಿಕ್ಸ್ ಕ್ರೀಡಾಕೂಟದಲ್ಲಿಂದು ಭಾರತಕ್ಕೆ ಚಿನ್ನದ ದಿನವಾಗಿದ್ದು, ಶೂಟಿಂಗ್ ವಿಭಾಗದಲ್ಲಿ ಅವನಿ ಲೇಖಾರ ಸ್ವರ್ಣ ಪದಕ ಗೆದ್ದು ದಾಖಲೆ ಬರೆದಿದ್ದಾರೆ. ಇದಲ್ಲದೆ, ಮತ್ತೆರಡು ಕಂಚಿನ ಪದಕಗಳೊಂದಿಗೆ ಭಾರತ ಇಂದು ಮೂರು ಪದಕ ಗೆದ್ದಿದೆ. ಮಹಿಳೆಯರ ೧೦ ಮೀಟರ್ ಏರ್‌ರೈಫಲ್ ವಿಭಾಗದ ಅಂತಿಮ ಸುತ್ತಿನಲ್ಲಿ ಅವನಿ ಲೇಖಾರ ಅವರು, ೨೪೯.೭ ಅಂಕಗಳ ಮೂಲಕ ವಿಜೇತರಾಗಿ ಹೊರಹೊಮ್ಮಿದರು. ಇದೇ ವಿಭಾಗದಲ್ಲಿ ಮೋನಾ ಅಗರ್‌ವಾಲ್ ೨೨೮.೭ ಅಂಕಗಳೊಂದಿಗೆ ಕಂಚಿನ ಪದಕ ಗೆದ್ದರು. ಮಹಿಳೆಯರ ೧೦೦ ಮೀಟರ್ ಸ್ಪ್ರಿಂಟ್‌ನಲ್ಲಿ ಪ್ರೀತಿಪಾಲ್ ಅವರು, ೧೪.೨೧ ಸೆಕೆಂಡ್‌ಗಳಲ್ಲಿ ಗುರಿ ತಲುಪುವ ಮೂಲಕ ಕಂಚಿನ ಪದಕ ಗೆದ್ದರು. ಪ್ರಧಾನಿ ನರೇಂದ್ರ ಮೋದಿ ಅವರು, ಪದಕ ವಿಜೇತರಿಗೆ ಅಭಿನಂದನೆ ಸಲ್ಲಿಸಿದ್ದಾರೆ. ಅವನಿ ಲೇಖಾರ ಅವರು, ಒಟ್ಟು ಮೂರು ಪ್ಯಾರಾಲಂಪಿಕ್ ಪದಕಗಳನ್ನು ಗೆಲ್ಲುವ ಮೂಲಕ ಇತಿಹಾಸ ನಿರ್ಮಿಸಿದ್ದಾರೆ ಎಂದು ಪ್ರಧಾನಿ ತಮ್ಮ ಸಂದೇಶದಲ್ಲಿ ಶ್ಲಾಘಿಸಿದ್ದಾರೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**